All India Radio: Bangalore
Regional Bulletin In Kannada
26.01.2025 / 6.40 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಖಾಸಗಿ ಹಣಕಾಸು ಸಂಸ್ಥೆಗಳ ವಿರುದ್ಧ ಕಠಿಣ ಕಾನೂನು ಜಾರಿಗೊಳಿಸಲು ಸರ್ಕಾರ ನಿರ್ಧಾರ
- ಪ್ರಸಕ್ತ ಹಣಕಾಸು ವರ್ಷದ ೯ ತಿಂಗಳಲ್ಲಿ ನೈಋತ್ಯ ರೈಲ್ವೆಗೆ ಒಟ್ಟು ೭ ಸಾವಿರದ ೧ ಕೋಟಿ ಆದಾಯ
- ರಾಜ್ಯದ ವಿವಿಧೆಡೆ ಗಣರಾಜ್ಯೋತ್ಸವ ಸಂಭ್ರಮ- ಬೆಂಗಳೂರಿನ ಮಾಣಿಕ್ ಷಾ ಮೈದಾನದಲ್ಲಿ ಆಕರ್ಷಕ ಪಥ ಸಂಚಲನ
- ನಾಳೆ ವಿಧಾನಸೌಧದ ಪಶ್ಚಿಮ ಧ್ವಾರದಲ್ಲಿ ಭುವನೇಶ್ವರಿಯ ಕಂಚಿನ ಪ್ರತಿಮೆ ಅನಾವರಣ

<><><><>

ಗ್ರಾಹಕರಿಗೆ ಖಾಸಗಿ ಹಣಕಾಸು ಸಂಸ್ಥೆಗಳ ಕಿರುಕುಳ ಹೆಚ್ಚುತ್ತಿದ್ದು, ಇದಕ್ಕೆ ಕಾರಣವಾದವರ ವಿರುದ್ಧ ದೂರು ನೀಡಿದ್ದಲ್ಲಿ ತಕ್ಷಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರೊಂದಿಗೆ ಮಾತನಾಡಿದ ಅವರು ಲೇವಾದೇವಿದಾರರು ನೀಡುವ ತೊಂದರೆಗಳ ವಿರುದ್ಧ ದೂರು ನೀಡಲು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸಹಾಯವಾಣಿ ತೆರೆಯಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಸಣ್ಣ ಸಾಲ ಲೇವಾದೇವಿದಾರರು ಆರ್‌ಬಿಐ ಕಾನೂನುಗಳನ್ನು ಪಾಲಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದ್ದು, ವಾರದೊಳಗೆ ಸುಗ್ರಿವಾಜ್ಞೆಯ ಮೂಲಕ ಕಠಿಣ ಕಾನೂನು ಜಾರಿಗೆ ತರಲಾಗುವುದು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತುಮಕೂರಿನಲ್ಲಿ ತಿಳಿಸಿದ್ದಾರೆ. ಸಣ್ಣ ಹಣಕಾಸು ಸಂಸ್ಥೆಗಳ ಹಾವಳಿಗೆ ಕಡಿವಾಣ ಹಾಕಲಾಗುವುದು ಎಂದು ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವ ಶಿವಾನಂದ ಪಾಟೀಲ್ ಹಾವೇರಿಯಲ್ಲಿ ಹೇಳಿದ್ದಾರೆ.

ಇನ್ನೊಂದೆಡೆ ಹುಬ್ಬಳ್ಳಿಯಲ್ಲಿ ಪ್ರತಿಕ್ರಿಯಿಸಿದ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಮೈಕ್ರೊ ಫೈನಾನ್ಸ್ ನಿಯಂತ್ರಣಕ್ಕೆ ಆರ್‌ಬಿಐ ನಿಯಮಗಳಿವೆ ಎಂದು ತಿಳಿಸಿದ್ದಾರೆ. ಮೈಕ್ರೊ

ಫೈನಾನ್ಸಿಗೆ ಬೆಂಬಲ ನೀಡುತ್ತಿರುವ  ಪೊಲೀಸ್ ಅಧಿಕಾರಿಗಳ ವಿರುದ್ಧ ಸರ್ಕಾರ ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

<><><>

ಹುಬ್ಬಳ್ಳಿಯ ರೈಲ್ವೆ ಇನ್ಸ್ಟಿಟ್ಯೂಟ್ ದಕ್ಷಿಣ ಮೈದಾನದಲ್ಲಿ  ನೈಋತ್ಯ ರೈಲ್ವೆ ವತಿಯಿಂದ ೭೬ನೇ ಗಣರಾಜ್ಯೋತ್ಸವ  ಆಚರಿಸಲಾಯಿತು. ನೈಋತ್ಯ ರೈಲ್ವೆಯ ಪ್ರಧಾನ ವ್ಯವಸ್ಥಾಪಕ ಅರವಿಂದ್ ಶ್ರೀವಾಸ್ತವ  ಧ್ವಜಾರೋಹಣ ನೆರವೇರಿಸಿದರು. ಈ ವೇಳೆ ಮಾತನಾಡಿದ ಅವರು ೨೦೨೪-೨೫ನೇ ಹಣಕಾಸು ವರ್ಷದ ಮೊದಲ ಒಂಬತ್ತು ತಿಂಗಳಲ್ಲಿ ನೈಋತ್ಯ ರೈಲ್ವೆ ಒಟ್ಟು ೬ ಸಾವಿರದ ಒಂದು ಕೋಟಿ ಆದಾಯ ಗಳಿಸಿದೆ. ಪ್ರಯಾಣಿಕರ ಆದಾಯ ೨ಸಾವಿರದ ೩೫೪  ಕೋಟಿ ಆಗಿದೆ. ಸರಕು ಆದಾಯ ೩ಸಾವಿರದ ೨೬೪ ಕೋಟಿ ಆಗಿದ್ದು, ಪಾರ್ಸೆಲ್ ಆದಾಯವು ಶೇಕಡಾ ೭.೪೧ರಷ್ಟು ಏರಿಕೆಯಾಗಿದ್ದು ೧೨೬ ಕೋಟಿ ಗೆ ತಲುಪಿದೆ. ಲೋಹ ತ್ಯಾಜ್ಯ ಮಾರಾಟದಲ್ಲಿ ಸಹ ಗಮನಾರ್ಹ ಬೆಳವಣಿಗೆಯಾಗಿದ್ದು ೯೫ ಕೋಟಿಯಿಂದ ೧೪೮ ಕೋಟಿ ರೂಪಾಯಿಗೆ ಏರಿಕೆಯಾಗಿದೆ.

<><><>

ಸಂವಿಧಾನದ ಆಶಯಗಳು ಉದಾತ್ತ ಶ್ರೀಮಂತ ಪರಂಪರೆಯನ್ನು ನೆನಪಿಸುತ್ತವೆ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಹೇಳಿದ್ದಾರೆ. ಬೆಂಗಳೂರಿನ ಫೀಲ್ಡ್ ಮಾರ್ಷಲ್ ಮಾಣಿಕ್ ಷಾ ಕವಾಯತು ಮೈದಾನದಲ್ಲಿ ನಡೆದ ಗಣರಾಜ್ಯೋತ್ಸವದಲ್ಲಿ ಧ್ವಜ ಅನಾವರಣಗೊಳಿಸಿ, ಭದ್ರತಾ ಪಡೆಗಳಿಂದ ಗೌರವ ರಕ್ಷೆ ಸ್ವೀಕರಿಸಿ ಅವರು ಮಾತನಾಡಿದರು. ಇತ್ತೀಚಿನ ದಿನಗಳಲ್ಲಿ ಸೈಬರ್ ದಾಳಿಯು ಅಘಾತಕಾರಿ ವಿಷಯವಾಗಿದೆ. ಅಪರಾಧಿಗಳನ್ನು ಪತ್ತೆಹಚ್ಚಲು ಮತ್ತು ಶಿಕ್ಷಿಸಲು ತಂತ್ರಜ್ಞಾನದ ಪರಿಣಾಮಕಾರಿ ಬಳಕೆ ಮಾಡುವುದು ಹಾಗೂ ಜನರಲ್ಲಿ ಜಾಗೃತಿ ಮೂಡಿಸುವುದು ಪ್ರಮುಖ ಹೆಜ್ಜೆಯಾಗಿದೆ ಎಂದರು. ಪ್ರಾಥಮಿಕ ಹಾಗೂ ಉನ್ನತ ಶಿಕ್ಷಣವನ್ನು ಬಲಪಡಿಸುವ ದೃಷ್ಟಿಯಿಂದ ರಾಜ್ಯದಲ್ಲಿ ಹೊಸ ಶಿಕ್ಷಣ ನೀತಿಯನ್ನು ಜಾರಿಗೆ ತರುವ ಪ್ರಕ್ರಿಯನ್ನು ಪ್ರಾರಂಭಿಸಲಾಗಿದೆ. ಜೊತೆಗೆ ಖಾಲಿ ಇರುವ ಬೋಧಕ ಹುದ್ದೆಗಳನ್ನು ಹಂತ-ಹಂತವಾಗಿ ಭರ್ತಿ ಮಾಡಲು ಉದ್ದೇಶಿಸಲಾಗಿದೆ. ಕಳೆದ ಒಂದೂವರೆ ವರ್ಷಗಳಲ್ಲಿ ೧೩ ಸಾವಿರಕ್ಕೂ ಹೆಚ್ಚಿನ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ಎಂದು ತಿಳಿಸಿದರು.

ಧ್ವನಿ - ರಾಜ್ಯಪಾಲರು

ಇದೇ ವೇಳೆ ಮಾಣಿಕ್ ಷಾ ಮೈದಾನದಲ್ಲಿ ಆಕರ್ಷಕ ಪಥ ಸಂಚಲನ ನಡೆಯಿತು. ಶಾಲಾ ಮಕ್ಕಳು ಪಥ ಸಂಚಲನದಲ್ಲಿ ಭಾಗಿಯಾಗಿದ್ದರು. ನಾವೆಲ್ಲರೂ ಭಾರತೀಯರು ಎಂಬ ಬಗ್ಗೆ ೮೦೦ ಮಕ್ಕಳಿಂದ ನೃತ್ಯ ಕಾರ್ಯಕ್ರಮ ನಡೆಯಿತು. ಅರಿವೆ ಅಂಬೇಡ್ಕರ್ ಎಂಬ ಬಗ್ಗೆ ಹೇರೊ ಹಳ್ಳಿಯ ೬೫೦ ಮಕ್ಕಳಿಂದ ನೃತ್ಯ ನಡೆಯಿತು.

<><><><>

ವಿಶ್ವಕ್ಕೆ ಮಾದರಿಯಾದ ಭಾರತದ ಲಿಖಿತ ಸಂವಿಧಾನದಂತೆ ನಡೆಯುವುದೇ ನಮ್ಮೆಲ್ಲರ ಜವಾಬ್ದಾರಿ ಎಂದು ಬೀದರ್ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ.ಖಂಡ್ರೆ ತಿಳಿಸಿದ್ದಾರೆ. ೭೬ನೇ ಗಣರಾಜ್ಯೋತ್ಸ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ಸಂವಿಧಾನದಲ್ಲಿ ಎಲ್ಲರಿಗೂ ಅಗತ್ಯವಾದ ಸ್ವಾತಂತ್ರ್ಯ ಹಕ್ಕುಗಳನ್ನು ಪ್ರಸ್ತಾಪಿಸಲಾಗಿದೆ ಎಂದು ಹೇಳಿದರು. ೭೬ ನೇ ಗಣರಾಜ್ಯೋತ್ಸವದ ಪ್ರಯುಕ್ತ ಇಂದು ಚಿಕ್ಕಬಳ್ಳಾಪುರದ ಭಗತ್ ಸಿಂಗ್ ಚಾರಿಟಬಲ್ ಟ್ರಸ್ಟ್ ಮತ್ತು ರಾಹುಲ್ ಕ್ರಿಕೆಟ್ ಕ್ಲಬ್ ಹಾಗೂ ಸಮಾನ ಮನಸ್ಕ ಸ್ನೇಹಿತರ ತಂಡದಿಂದ ಜಿಲ್ಲೆಯ ನಂದಿಗಿರಿಧಾಮದಲ್ಲಿ ಪ್ಲಾಸ್ಟಿಕ್ ಮುಕ್ತ ನಂದಿಬೆಟ್ಟ ಹೆಸರಿನಲ್ಲಿ ಸ್ವಚ್ಛತಾ ಅಭಿಯಾನವನ್ನು ಹಮ್ಮಿಕೊಳ್ಳಲಾಗಿತ್ತು. ವಿವಿಧತೆಯಲ್ಲಿ ಏಕತೆಯನ್ನು ಸಾರುವ ರಾಷ್ಟ್ರ ನಮ್ಮ ಭಾರತ ಎಂದು ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಮಧು ಬಂಗಾರಪ್ಪ ತಿಳಿಸಿದ್ದಾರೆ.

ಧ್ವನಿ - ಸಚಿವ ಎಸ್.ಮಧು ಬಂಗಾರಪ್ಪ

ಮಹಾನ್ ಮೇಧಾವಿಗಳ ಸತತ ಅಧ್ಯಯನ, ಚರ್ಚೆಗಳ ಅವಿರತ ಶ್ರಮದ ಫಲವಾಗಿ ಬೃಹತ್ ಗಣತಂತ್ರವಾಗಿ ಹೊರಹೊಮ್ಮಿದ ದೇಶ ಭಾರತ ಎಂದು ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ತಿಳಿಸಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯಲ್ಲಿಯೂ ಗಣರಾಜ್ಯೋತ್ಸವ ದಿನಾಚರಣೆ ಆಚರಿಸಲಾಯಿತು. ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ ಜಾರ್ಜ್, ಸರ್ಕಾರ ಹಲವಾರು ಯೋಜನೆಗಳನ್ನು ರೂಪಿಸಿ ರಾಜ್ಯದ ಸಮಗ್ರ ಅಭಿವೃದ್ಧಿಗಾಗಿ ಶ್ರಮಿಸುತ್ತಿದೆ ಎಂದು ತಿಳಿಸಿದ್ದಾರೆ. ಕೋಲಾರದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಬಿ. ಎಸ್.ಸುರೇಶ್ ಧ್ವಜಾರೋಹಣ ನೆರವೇರಿಸಿದರು.

ಧ್ವನಿ - ಭೈರತಿ ಸುರೇಶ್

ರಾಜ್ಯದಲ್ಲಿ ಆರ್ಥಿಕ ಸಮಾನತೆ ಎಲ್ಲರಿಗೂ ಸಿಗಬೇಕು ಎಂಬ ಉದ್ದೇಶದಿಂದ ಪಂಚ ಗ್ಯಾರಂಟಿಗಳನ್ನು ಜಾರಿಗೆ ತರಲಾಯಿತು ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ. ಉಡುಪಿ ಜಿಲ್ಲಾ ಕ್ರೀಡಾಂಗಣದಲ್ಲಿ ಗಣರಾಜ್ಯೋತ್ಸವ ಧ್ವಜಾರೋಹಣ ನೆರವೇರಿಸಿ

ಅವರು ಮಾತನಾಡಿದರು. ಕಲಬುರಗಿಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ೭೬ನೇ ಗಣರಾಜ್ಯೋತ್ಸವ ದಿನಾಚರಣೆಯ ರಾಷ್ಟ್ರಧ್ವಜಾರೋಹಣ ನೆರವೇರಿಸಿರು.

<><><>

ಕರ್ನಾಟಕ ಸುವರ್ಣ ಮಹೋತ್ಸವ ಅಂಗವಾಗಿ ವಿಧಾನಸೌಧ ಪಶ್ಚಿಮ ದ್ವಾರದಲ್ಲಿ ಭುವನೇಶ್ವರಿಯ ೨೫ ಅಡಿ ಎತ್ತರದ ಕಂಚಿನ ಪ್ರತಿಮೆ ಸ್ಥಾಪಿಸಲಾಗಿದ್ದು, ನಾಳೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಅನಾವರಣಗೊಳಿಸಲಿದ್ದಾರೆ. ನಾಡದೇವಿ ಪ್ರತಿಮೆಯ ಹಿಂದೆ ಕರ್ನಾಟಕ ನಕ್ಷೆ ಹಾಗೂ ಉಬ್ಬು ಶಿಲ್ಪ ಇರಲಿದೆ. ಮುಂಭಾಗದಲ್ಲಿ ಭೌಗೋಳಿಕ ನಕ್ಷೆ ಇದ್ದರೆ, ಹಿಂಬದಿಯಲ್ಲಿ ನಾಡಗೀತೆಯನ್ನು ಕೆತ್ತಲಾಗಿದೆ. ಹೊಯ್ಸಳ, ಚಾಲುಕ್ಯ ಕದಂಬ ಹಾಗೂ ಆಧುನಿಕ ನೈಜ ಶಿಲ್ಪಗಳ ಶೈಲಿಗಳನ್ನು ಅಳವಡಿಸಿ ಪ್ರತಿಮೆಯನ್ನು ನಿರ್ಮಿಸಲಾಗಿದೆ. ಹೊಯ್ಸಳ ಲಾಂಛನ, ವೈಜಯಂತಿ ಮಾಲೆ, ಕಂಠಿಹಾರ, ಗಂಡ ಭೇರುಂಡ ಇರಲಿದೆ.

<><><>

ಈ ಬಾರಿಯ ಪದ್ಮಪ್ರಶಸ್ತಿಗಳಿಗೆ ಕರ್ನಾಟಕದ ೯ ಸಾಧಕರನ್ನು ಆಯ್ಕೆ ಮಾಡಲಾಗಿದೆ. ವಯೋಲಿನ್ ವಾದಕ ಎಲ್.ಸುಬ್ರಮಣ್ಯಂ ಅವರು ಪದ್ಮವಿಭೂಷಣಕ್ಕೆ ಭಾಜನರಾಗಿದ್ದರೆ, ಸಾಹಿತ್ಯ ಮತ್ತು ಶಿಕ್ಷಣ ಕ್ಷೇತ್ರದಲ್ಲಿ ಪ್ರಸಾರ ಭಾರತಿ ಮಾಜಿ ಅಧ್ಯಕ್ಷ ಎ.ಸೂರ್ಯಪ್ರಕಾಶ್ ಅವರು ಪದ್ಮಭೂಷಣ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ಕನ್ನಡದ ಚಲನಚಿತ್ರ ರಂಗದ ಹಿರಿಯ ನಟ ಅನಂತನಾಗ್ ಅವರು ಪದ್ಮಭೂಷಣ ಪ್ರಶಸ್ತಿಗೆ ಪಾತ್ರರಾಗಿದ್ದಾರೆ. ಕನ್ನಡದ ೧೭೫ ಸಿನಿಮಾಗಳಲ್ಲಿ ನಟಿಸಿರುವ ಅನಂತನಾಗ್ ಕನ್ನಡ ಮಾತ್ರ ವಲ್ಲದೆ ಮಲೆಯಾಳಂ, ತೆಲಗು, ಹಿಂದಿ ಹಾಗೂ ಮರಾಠಿ ಸಿನಿಮಾಗಳಲ್ಲೂ ನಟಿಸಿದ್ದಾರೆ. ಆಕಾಶವಾಣಿ ಜೊತೆ ಸಂತಸ ಹಂಚಿಕೊಂಡಿರುವ ಅನಂತನಾಗ್ ಈ ಪ್ರಶಸ್ತಿಯನ್ನು ಕನ್ನಡ ನಾಡಿನ ಜನರಿಗೆ ಸಮರ್ಪಿಸುವುದಾಗಿ ತಿಳಿಸಿದ್ದಾರೆ.

ಧ್ವನಿ - ಅನಂತನಾಗ್

ಎಂದಿನಂತೆ ಈ ಬಾರಿಯೂ ಪದ್ಮಪ್ರಶಸ್ತಿಗಳಿಗಾಗಿ ಕೇಂದ್ರ ಸರ್ಕಾರ ತೆರೆಮರೆಯ ಸಾಧಕರನ್ನು ಆಯ್ಕೆ ಮಾಡಿದ್ದು, ಕಲೆಯ ಕ್ಷೇತ್ರದಲ್ಲಿ ತೊಗಲು ಗೊಂಬೆಯಾಟ ಕಲಾವಿದರಾದ ಭೀಮವ್ವ ದೊಡ್ಡಬಾಳಪ್ಪ ಶಿಳ್ಳೈಕ್ಯಾತಾರ, ಚಲನಚಿತ್ರ ನಿರ್ಮಾಪಕ ಹಾಸನ ರಘು, ವ್ಯಾಪಾರ ಮತ್ತು ಕೈಗಾರಿಕಾ ಕ್ಷೇತ್ರದಲ್ಲಿ ಪ್ರಶಾಂತ್ ಪ್ರಕಾಶ್, ಸಂಗೀತ ಕ್ಷೇತ್ರದಲ್ಲಿ ರಿಕ್ಕಿಕೇಜ್, ಜಾನಪದ ಕಲೆಗಾಗಿ ವೆಂಕಪ್ಪ ಅಂಬಾಜಿ ಸುಗಟೇಕಾರ್, ವೈದ್ಯಕೀಯ ಕ್ಷೇತ್ರದಲ್ಲಿ ಡಾ.ವಿಜಯಲಕ್ಷ್ಮೀ ದೇಶಮಾನೆ ಕರ್ನಾಟಕದಿಂದ ಆಯ್ಕೆಯಾಗಿದ್ದಾರೆ.

<><><>

ಚೊಚ್ಚಲ ಖೋ ಖೋ ವಿಶ್ವಕಪ್ ಚಾಂಪಿಯನ್ ಪಟ್ಟ ಗೆದ್ದ ಭಾರತ ತಂಡದ ಆಟಗಾರ್ತಿ ಚೈತ್ರಾಗೆ ಹುಟ್ಟೂರು ಮೈಸೂರು ಜಿಲ್ಲೆಯ ಟಿ.ನರಸೀಪುರ ತಾಲೂಕಿನ ಕುರುಬೂರು ಗ್ರಾಮದಲ್ಲಿ ಅದ್ದೂರಿ ಸ್ವಾಗತ ಕೋರಲಾಯಿತು. ಕುರುಬೂರು ಗ್ರಾಮಕ್ಕೆ ಆಗಮಿಸಿದ ಅವರನ್ನು ಗ್ರಾಮಸ್ಥರು ಹಾಗೂ ಶಾಲಾ ಶಿಕ್ಷಕರು, ಮಕ್ಕಳು ಅದ್ದೂರಿಯಾಗಿ ಸ್ವಾಗತಿಸಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>